ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

ಸ್ವಚ್ಛ ಭಾರತ
ಒಂದು ಹೆಜ್ಜೆ ಸ್ವಚ್ಛತೆಯ ಕಡೆಗೆ

# ದಿವ್ಯಾಂಗರಿಗೆ ಸಹಾಯಕವಾದ ವೈಯಕ್ತಿಕ ಶೌಚಾಲಯ.



ಬಯಲು ಬಹಿರ್ದೆಸೆ ಮುಕ್ತ ಸಮಾಜದ ನಿರ್ಮಾಣ ಸ್ವಚ್ಛ ಭಾರತ್ ಮಿಷನ್ ನ ಪ್ರಮುಖ ಧ್ಯೇಯೋದ್ದೇಶವಾಗಿದ್ದು , ಈ  ನಿಟ್ಟಿನಲ್ಲಿ ಹಲವು ಪ್ರಾಯೋಗಿಕ ಪ್ರಯತ್ನಗಳು ನಿರಂತರವಾಗಿ ಸಾಗಿವೆ. ಪರಿಣಾಮವಾಗಿ ವೈಯಕ್ತಿಕ ಶೌಚಾಲಯ, ಸಮುದಾಯ/ಸಾರ್ವಜನಿಕ ಶೌಚಾಲಯ, ಸಮುದಾಯ ನೈರ್ಮಲ್ಯ ಸಂಕೀರ್ಣಗಳ ನಿರ್ಮಾಣದ ಮೂಲಕ ಇಂದು ಹಲವು ಗ್ರಾಮಗಳು ಬಯಲು ಶೌಚ ಮುಕ್ತ ಸ್ಥಿತಿಯನ್ನು ತಲುಪಿವೆ.

ಯಾವುದೇ ಯೋಜನೆಯು ಯಶಸ್ವಿಯಾಗಿ ಅನುಷ್ಠಾನವಾಗಬೇಕಾದರೆ ಅದು ಎಲ್ಲಾ ವರ್ಗದ ಜನರನ್ನು ತಲುಪಬೇಕಿದೆ. ಸ್ವಚ್ಛ ಭಾರತ್ ಯೋಜನೆಯ ಘಟಕಾಂಶಗಳಲ್ಲಿ ಒಂದಾದ ವೈಯಕ್ತಿಕ ಶೌಚಾಲಯವನ್ನು ಕಟ್ಟಿಸಲು ಸರ್ಕಾರದಿಂದ ಪ್ರೋತ್ಸಾಹಧನವನ್ನು ನೀಡಲಾಗುತ್ತದೆ. ಇದೇ ಪ್ರೋತ್ಸಾಹ ಧನವನ್ನು ಬಳಸಿಕೊಂಡು ಶೌಚಾಲಯ ನಿರ್ಮಿಸಿಕೊಂಡ ದಿವ್ಯಾಂಗ ವ್ಯಕ್ತಿಯ ಜೀವನಮಟ್ಟ ಸಂಪೂರ್ಣವಾಗಿ ಬದಲಾಗಿದೆ.

ಶಿವಮೊಗ್ಗ ಜಿಲ್ಲೆಯ ಸೊರಬ ತಾಲ್ಲೂಕಿನ ಕಾತುವಳ್ಳಿ ಗ್ರಾ.ಪಂ ವ್ಯಾಪ್ತಿಯ ದಿನೇಶ್ ಅವರು ಹುಟ್ಟಿನಿಂದಲೇ ಅಂಗವೈಕಲ್ಯತೆಯನ್ನು ಹೊಂದಿದ್ದು , ಜೀವನ ನಡೆಸುವುದೇ ಕಷ್ಟ ಎನ್ನುವಂತಾಗಿತ್ತು. ಹಣದ ಕೊರತೆಯಿಂದ ಶೌಚಾಲಯ ಕಟ್ಟಿಸಲಾಗದೆ ಪಕ್ಕದ ಮನೆಯ ಶೌಚಾಲಯವನ್ನು ಅವಲಂಬಿಸಿದ್ದರು.

ಈಗ
**ಸ್ವಚ್ಛ ಭಾರತ್ ಮಿಷನ್ ಯೋಜನೆಯು**
ದಿನೇಶ್ ಹಾಗೂ ಅವರ ಕುಟುಂಬಸ್ಥರ ಜೀವನದ ದಿಕ್ಕನ್ನೇ ಬದಲಾಯಿಸಿದೆ.

**2022ರಲ್ಲಿ ಸ್ವಚ್ಛ ಭಾರತ್ ಮಿಷನ್ ಯೋಜನೆಯಡಿ**

**12,000ರೂ**

**ಸಹಾಯಧನ ಪಡೆದು ಗ್ರಾಮ ಪಂಚಾಯಿತಿಯ ನೆರವಿನಿಂದ ಶೌಚಾಲಯವನ್ನು ನಿರ್ಮಿಸಿಕೊಂಡು ಪ್ರತಿನಿತ್ಯ ಶೌಚಾಲಯ ಬಳಸುತ್ತಿದ್ದಾರೆ. ಈ ಮೂಲಕ ಬಯಲು ಶೌಚ ಮುಕ್ತ ಕರ್ನಾಟಕ ನಿರ್ಮಾಣಕ್ಕೆ ಕೈ ಜೋಡಿಸಿದ್ದಾರೆ.**

“2022ರಲ್ಲಿ ಗ್ರಾಮ ಪಂಚಾಯತಿ ಸಹಕಾರದಿಂದ ಸ್ವಚ್ಛ ಭಾರತ್ ಮಿಷನ್ ಯೋಜನೆಯಡಿ ನಾವು ಶೌಚಾಲಯವನ್ನು ಕಟ್ಟಿಸಿಕೊಂಡೆವು. ಈ ಹಿಂದೆ ಶೌಚಾಲಯಕ್ಕೆ ನಾನು ಹಾಗೂ ನನ್ನ ಕುಟುಂಬ ಪಕ್ಕದ ಮನೆಯ ಶೌಚಾಲಯವನ್ನು ಅವಲಂಬಿಸಿದ್ದೆವು. ಆದರೆ ಈಗ ನಮ್ಮ ಮನೆಯಲ್ಲಿ ಶೌಚಾಲಯ ನಿರ್ಮಾಣ ಮಾಡಿಕೊಂಡ ಬಳಿಕ ತುಂಬಾ ಅನುಕೂಲವಾಗಿದೆ.”

**ದಿನೇಶ್**
**ವೈಯಕ್ತಿಕ ಶೌಚಾಲಯ ಫಲಾನುಭವಿ.**
**ಕಾತುವಳ್ಳಿ. ಸೊರಬ ತಾಲ್ಲೂಕು.**